# ಕರ್ನಾಟಕ ಲೋಕಾಯುಕ್ತ

ನಂ.ಕಂಪ್ಲೆಂಟ್/ಉಪಲೋಕ್/ಬಿಡಿ-7533/2014/ಡಿಆರ್ಇ-1

ಬಹುಮಹಡಿಗಳ ಕಟ್ಟಡ,
ಡಾ:ಅಂಬೇಡ್ಕರ್ ವೀದಿ,
ಬೆಂಗಳೂರು.
ದಿನಾಂಕ: 24/09/2016

## ಕರ್ನಾಟಕ ಲೋಕಾಯುಕ್ತ ಕಾಯಿದೆ, 1984 ರ ಕಲಂ 12(3) ರನ್ವಯ ವರದಿ

**ವಿಷಯ:** ಶ್ರೀ.ಚಮನ್‌ಸಾಬ್ ಕೆ.ಸಿ. ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಕೊಡಗನೂರು ಗ್ರಾಮ ಪಂಚಾಯಿತಿ, ಮತ್ತು ಶ್ರೀ.ಜೆ.ಹೆಚ್.ಯುವರಾಜ್, ಹಿಂದಿನ ಅಧ್ಯಕ್ಷರು, ಕೊಡಗನೂರು ಗ್ರಾಮಪಂಚಾಯಿತಿ, ದಾವಣಗೆರೆ ತಾಲ್ಲೂಕು ಮತ್ತು ಜಿಲ್ಲೆ, – ಇವರು ಎಸಗಿರುವ ಅವ್ಯವಹಾರದ ಬಗ್ಗೆ ಇವರ ವಿರುದ್ಧದ ನಡವಳಿ ಕುರಿತು.

******

1) ಶ್ರೀ.ಬಿ.ಎಲ್.ಶಾಂತರಾಜ್ ಬಿನ್ ಬಿ.ಆರ್.ಲಕ್ಷ್ಮೀಪತಿ, ಬೊಮ್ಮೇನಹಳ್ಳಿ ಗ್ರಾಮ, ಕೊಡಗನೂರು ಅಂಚೆ, ದಾವಣಗೆರೆ ತಾಲ್ಲೂಕು ಮತ್ತು ಜಿಲ್ಲೆ, (ಇನ್ನು ಮುಂದೆ ದೂರುದಾರರು ಎಂದು ಕರೆಯಲ್ಪಡುತ್ತಾರೆ) ರವರು ಶ್ರೀ.ಚಮನ್‌ಸಾಬ್ ಕೆ.ಸಿ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಕೊಡಗನೂರು ಗ್ರಾಮ ಪಂಚಾಯಿತಿ, ಮತ್ತು ಶ್ರೀ.ಜೆ.ಹೆಚ್.ಯುವರಾಜ್, ಹಿಂದಿನ ಅಧ್ಯಕ್ಷರು, ಕೊಡಗನೂರು ಗ್ರಾಮಪಂಚಾಯಿತಿ, ದಾವಣಗೆರೆ ತಾಲ್ಲೂಕು ಮತ್ತು ಜಿಲ್ಲೆ, (ಇನ್ನು ಮುಂದೆ ಎದುರುದಾರರು ಎಂದು ಕರೆಯಲ್ಪಡುತ್ತಾರೆ) ಇವರ ವಿರುದ್ಧ ದೂರು ಸಲ್ಲಿಸಿದ ಮೇರೆಗೆ, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ರ ಕಲಂ 9 ರಡಿಯಲ್ಲಿ ದತ್ತವಾದ ಅಧಿಕಾರ ಚಲಾಯಿಸಿ, ವಿಚಾರಣೆಗೆ ತೆಗೆದುಕೊಂಡು ತನಿಖೆ ಮಾಡಿದೆ.

2) ದೂರುದಾರರು ತಮ್ಮ ದೂರಿನಲ್ಲಿ ಕೊಡಗನೂರು ಗ್ರಾಮದ ತಿಪ್ಪಣ್ಣ ಬಿನ್ ನಿಂಗಪ್ಪ ಇವರಿಗೆ ಸೇರಿದ ರಿ.ಸ.ನಂ.322 ಜಮೀನಿನಲ್ಲಿ ಬಾಳೆ ತೋಟ ನಿರ್ಮಾಣ ಮಾಡುವ ಬಗ್ಗೆ ದಿ.2/7/11 ರಂದು ತಾಲ್ಲೂಕು ಪಂಚಾಯತ್ ದಾವಣಗೆರೆ ಇವರ ಕಾರ್ಯಾಲಯದಿಂದ ಎನ್.ಆರ್.ಇ.ಜಿ.ಕಾಮಗಾರಿ ಆದೇಶ ಪತ್ರ ಪಡೆಯಲಾಗಿರುತ್ತದೆ. ಆದರೆ, ಸದರಿ ಜಮೀನಿನಲ್ಲಿ ಬಾಳೆಯನ್ನು ಬೆಳೆದಿರುವುದಿಲ್ಲ. ಮೆಕ್ಕೆಜೋಳವನ್ನು ಬೆಳೆಸಲಾಗಿದೆಯೆಂದು ಪಹಣಿ ಪತ್ರಿಕೆಯಲ್ಲಿ ಕಂಡುಬರುತ್ತದೆ. ಎದುರುದಾರರು ಸುಳ್ಳು ದಾಖಲೆಗಳನ್ನು ಸೃಷ್ಟಿಸಿ ಹಣವನ್ನು ದುರುಪಯೋಗ ಪಡಿಸಿಕೊಂಡಿದ್ದು, ಅವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕೆಂದು ಕೋರಿರುತ್ತಾರೆ.

3) ದೂರುದಾರರ ದೂರಿನ ಮೇಲೆ ಆಕ್ಷೇಪಣೆಯನ್ನು ಸಲ್ಲಿಸುವಂತೆ ಎದುರುದಾರರಿಗೆ ಆದೇಶಿಸಲಾಗಿತ್ತು. ಎದುರುದಾರರು ಆಕ್ಷೇಪಣೆಯನ್ನು ಸಲ್ಲಿಸಿದ್ದು, ತಮ್ಮ ಆಕ್ಷೇಪಣೆಯಲ್ಲಿ ಕೊಡಗನೂರು ಗ್ರಾಮದ ತಿಪ್ಪಣ್ಣನವರ ಜಮೀನಿನಲ್ಲಿ ಬಾಳೆ ತೋಟ ಬೆಳೆಸಲು 2011-12ನೇ ಸಾಲಿನ ಕೊಡಗನೂರು ಗ್ರಾಮಪಂಚಾಯಿತಿಯ ಎನ್.ಆರ್.ಇ.ಜಿ. ಕ್ರಿಯಾ ಯೋಜನೆಯಲ್ಲಿ ಅನುಮೋದನೆಯಾಗಿದ್ದು, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ದಾವಣಗೆರೆ ಇವರು ನೀಡಿದ ಆದೇಶ

ಪತ್ರದಂತೆ ತಿಪ್ಪಣ್ಣನವರು ಸ್ವಂತ ಜಮೀನಿನಲ್ಲಿ ಬಾಳೆ ಸಸಿಯನ್ನು ಹಾಕಿ ಬೆಳೆಯನ್ನು ತೆಗೆದುಕೊಂಡಿರುತ್ತಾರೆ. ಫಲಾನುಭವಿ ಸೂಚಿಸಿ ಕೆಲಸ ಮಾಡಿಕೊಂಡಿರುವ ಕೂಲಿ ಕಾರ್ಮಿಕರಿಗೆ ಗ್ರಾಮ ಪಂಚಾಯಿತಿಯಿಂದ ಇ.ಎಫ್.ಎಂ.ಎಸ್. ಮೂಲಕ ಕೂಲಿಕಾರರ ಖಾತೆಗೆ ನೇರವಾಗಿ ಹಣ ಪಾವತಿಯಾಗಿರುತ್ತದೆ. ಕಾಮಗಾರಿ ಪೂರ್ಣಗೊಂಡಿರುವುದಕ್ಕೆ ಸಹಾಯಕ ತೋಟಗಾರಿಕಾ ಇಲಾಖೆಯವರು ದೃಢೀಕರಣ ಪತ್ರ ನೀಡಿರುತ್ತಾರೆ. ದೂರುದಾರರ ಪತ್ನಿ ಮಾಜಿ ಗ್ರಾಮಪಂಚಾಯಿತಿಯ ಅಧ್ಯಕ್ಷರಾಗಿದ್ದು, ಅವರನ್ನು ಅಧ್ಯಕ್ಷ ಗಾದಿಯಿಂದ ಇಳಿಸಿರುವುದನ್ನು ನೆಪ ಮಾಡಿಕೊಂಡು ದೂರುದಾರರು ಈ ದೂರನ್ನು ದಾಖಲಿಸಿರುತ್ತಾರೆಂದು ತಿಳಿಸಿರುತ್ತಾರೆ.

4) ಎದುರುದಾರರ ಆಕ್ಷೇಪಣೆಯ ಮೇಲೆ ದೂರುದಾರರು ಪ್ರತ್ಯುತ್ತರವನ್ನು ಸಲ್ಲಿಸಿದ್ದು, ಪ್ರತ್ಯುತ್ತರದಲ್ಲಿ ತಿಪ್ಪಣ್ಣ ಬಿನ್ ನಿಂಗಪ್ಪ ಇವರು ಕೊಡಗನೂರು ಗ್ರಾಮದ ರಿ.ಸ.ನಂ.322/2 ರಲ್ಲಿ ಬಾಳೆ ಬೆಳೆಯನ್ನು ಬೆಳೆದಿರುವುದಿಲ್ಲ. ಸಹಾಯಕ ನಿರ್ದೇಶಕರು, ತೋಟಗಾರಿಕೆ ಇಲಾಖೆ, ದಾವಣಗೆರೆ ಇವರು ಸ್ಥಳ ತನಿಖೆ ಮಾಡದೆ ಎಂ.ಬಿ.ದಾಖಲು ಮಾಡಿರುತ್ತಾರೆ. ಸದರಿ ಜಮೀನಿನಲ್ಲಿ ಮೆಕ್ಕೆಜೋಳ ಬೆಳೆದಿರುವುದಾಗಿ 2011-12ನೇ ಸಾಲಿನ ಪಹಣಿ ಪತ್ರಿಕೆಯಲ್ಲಿ ಗ್ರಾಮ ಲೆಕ್ಕಾಧಿಕಾರಿಯವರು ದಾಖಲೆ ಮಾಡಿರುತ್ತಾರೆ. ಬೇರೆ ಕಡೆ ಬಾಳೆ ಬೆಳೆ ಬೆಳೆದಿರುವ ಛಾಯಾಚಿತ್ರವನ್ನು ಆರೋಪಿಗಳು ಲಗತ್ತಿಸಿರುತ್ತಾರೆ. ಎದುರುದಾರರು ಸುಳ್ಳು ಮಾಹಿತಿಯನ್ನು ನೀಡಿರುತ್ತಾರೆಂದು ಹೇಳಿರುತ್ತಾರೆ.

5) ದೂರುದಾರರು ಹಾಜರು ಪಡಿಸಿರುವ ಪಹಣಿ ಪತ್ರಿಕೆಯ ಪ್ರತಿಯನ್ನು ಪರಿಶೀಲಿಸಿದಾಗ, ತಿಪ್ಪಣ್ಣನವರ ಸ್ವಾಧೀನದಲ್ಲಿರುವ ಸ.ನಂ.322/2 ರಲ್ಲಿ 2011-12ನೇ ಸಾಲಿನಲ್ಲಿ ಮೆಕ್ಕೆಜೋಳ ಎಂದು ನಮೂದು ಇರುವುದು ಕಂಡುಬರುತ್ತದೆ. ಅದನ್ನು ಪರಿಶೀಲಿಸಿದಾಗ, ಸದರಿ ವರ್ಷದಲ್ಲಿ ಬಾಳೆ ಬೆಳೆಯನ್ನು ತಿಪ್ಪಣ್ಣನವರ ಜಮೀನಿನಲ್ಲಿ ಬೆಳೆದಿರುವುದಿಲ್ಲವೆನ್ನುವುದು ಮೇಲ್ನೋಟಕ್ಕೆ ಕಂಡುಬರುತ್ತದೆ.

6) ಮೇಲ್ಕಂಡ ಅಂಶಗಳನ್ನು ಗಮನಿಸಿದಾಗ, ಗ್ರಾಮಪಂಚಾಯಿತಿಯಲ್ಲಿ ಕೈಗೊಂಡ ಕಾಮಗಾರಿಗಳಲ್ಲಿ ಅಕ್ರಮ/ಅವ್ಯವಹಾರ ನಡೆದಿರುವುದು ಮೇಲ್ನೋಟಕ್ಕೆ ಕಂಡುಬರುತ್ತದೆ. ಆದುದರಿಂದ, ಎದುರುದಾರರ ಆಕ್ಷೇಪಣೆಯು ಅವರ ಮೇಲಿನ ಆಪಾದನೆಯನ್ನು ಅಲ್ಲಗಳೆಯಲು ಸೂಕ್ತ ಅಥವಾ ಸಮಾಧಾನಕರವಾಗಿರುವುದಿಲ್ಲ ಮತ್ತು ದೂರುದಾರರ ದೂರನ್ನು ಅಲ್ಲಗಳೆಯಲು ಯಾವುದೇ ಸಮಂಜಸ/ಸಮರ್ಪಕ ಉತ್ತರವನ್ನು ತಮ್ಮ ಆಕ್ಷೇಪಣೆಯಲ್ಲಿ ನೀಡಿಲ್ಲವೆಂಬ ಅಭಿಪ್ರಾಯಕ್ಕೆ ಬಂದಿದೆ.

7) 1ನೇ ಎದುರುದಾರರು ಸಾರ್ವಜನಿಕ/ಸರ್ಕಾರಿ ನೌಕರರಾಗಿದ್ದು, ತಮ್ಮ ಕರ್ತವ್ಯ ಪರಿಪಾಲನೆಯಲ್ಲಿ ನಿಷ್ಠೆಯನ್ನು ತೋರದೆ, ಕರ್ತವ್ಯಲೋಪವೆಸಗಿ, ದುರ್ವರ್ತನೆ ತೋರಿಸಿ, ಸಾರ್ವಜನಿಕ/ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿರುವುದು ಮೇಲ್ನೋಟಕ್ಕೆ ಕಂಡುಬರುತ್ತಿರುವುದರಿಂದ, ಕರ್ನಾಟಕ ನಾಗರೀಕ ಸೇವೆ (ನಡತೆ) ನಿಯಮ 1966 ರ ನಿಯಮ 3(1)(ii) ಮತ್ತು (iii) ರನ್ವಯ ಶಿಸ್ತು ಕ್ರಮಕ್ಕೆ ಬಾಧ್ಯರಾಗಿರುತ್ತಾರೆಂದು ಕಂಡುಬಂದಿದ್ದರಿಂದ, ಅವರ ವಿರುದ್ಧ ಶಿಸ್ತು ನಡವಳಿಕೆ ಹೂಡಲು ಮತ್ತು ಹಾಗೆಯೇ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿರ್ಬಂಧ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ 14-ಎ ರ ಅಡಿಯಲ್ಲಿ, 1ನೇ ಎದುರುದಾರರ ವಿರುದ್ಧ ವಿಚಾರಣೆ ನಡೆಸಲು ಈ ಪ್ರಾಧಿಕಾರಕ್ಕೆ ಒಪ್ಪಿಸುವಂತೆ ಹಾಗೂ 2ನೇ ಎದುರುದಾರರು ಜನಪ್ರತಿನಿಧಿಯಾಗಿದ್ದು, ಅವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್

ಅಧಿನಿಯಮ 1993 ಕಲಂ 43ಎ ರನ್ವಯ ಕ್ರಮ ಕೈಗೊಳ್ಳಲು ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 12(3) ರನ್ವಯ ಪ್ರದತ್ತವಾದ ಅಧಿಕಾರದಡಿ, ಶಿಸ್ತು ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಿದೆ.

8) ಮುಂದುವರೆದು, ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 12(4) ರ ಪ್ರಕಾರ, ಶಿಸ್ತು ಪ್ರಾಧಿಕಾರವು ವರದಿಯಂತೆ ಕ್ರಮ ಕೈಗೊಂಡು ಅಥವಾ ಕೈಗೊಳ್ಳಬಹುದಾದ ಕ್ರಮವನ್ನು ಈ ವರದಿ ತಲುಪಿದ ದಿನಾಂಕದಿಂದ **ಮೂರು ತಿಂಗಳೊಳಗಾಗಿ** ಈ ಪ್ರಾಧಿಕಾರಕ್ಕೆ ತಿಳಿಸಲೂ ಹೇಳಿದೆ.

ಸಂಬಂಧಪಟ್ಟ ದಾಖಲೆಗಳನ್ನು ಲಗತ್ತಿಸಿದೆ.

(ನ್ಯಾಯಮೂರ್ತಿ ಸುಭಾಷ್ ಬಿ. ಆಡಿ)
ಉಪಲೋಕಾಯುಕ್ತರು-2,
ಕರ್ನಾಟಕ ರಾಜ್ಯ, ಬೆಂಗಳೂರು.